ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾ.ಕ.ಕೊ/13/2015-16. ದಿನಾಂಕ:12-04-2016

| ಅರ್ಜಿದಾರರು | ತಕರಾರುದಾರರು |
|---|---|
| ಸಿದ್ದಮ್ಮ ಹೆಚ್.ಗಂಡ ಲೇಟ್ ಪರುಶುರಾಮಪ್ಪ<br>ಕೆ.ಅಯ್ಯನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಹೆಚ್.ಆನಂದ ತಂದೆ ಹುಣಸೆಕಟ್ಟೆ ಹಾಲಪ್ಪ<br>ಕೆ.ಅಯ್ಯನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು |

ಕೂಡ್ಲಿಗಿ ತಾಲೂಕು ಕನ್ನಾಯಕನಕಟ್ಟೆ ಗ್ರಾಮದ ಸನಂ 144ಬಿ ವಿಸ್ತೀರ್ಣ 5-20. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ.

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕನ್ನಾಯಕನಕಟ್ಟೆ ಗ್ರಾಮದ ಸನಂ 144ಬಿ ವಿಸ್ತೀರ್ಣ 5-20. ಎಕ್ರೆ ಜಮೀನನ್ನು ಸದರಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಸಿದ್ದಮ್ಮ ಹೆಚ್. ಗಂಡ ಲೇಟ್ ಪರಶುರಾಮಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕನ್ನಾಯಕನಕಟ್ಟೆ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 19-09-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ತಾಲೂಕು ಕೆ.ಅಯ್ಯನಹಳ್ಳಿ ಗ್ರಾಮದ ಹೆಚ್.ಆನಂದ ತಂದೆ ಹುಣಸೆಕಟ್ಟೆ ಹಾಲಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 11/2014-15. ದಿನಾಂಕ 20-10-2014 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ: 07-07-2015 ರಿಂದ 12-04-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆಯ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಕನ್ನಾಯಕನಕಟ್ಟೆ ಗ್ರಾಮದ ಸನಂ 144ಬಿ ವಿಸ್ತೀರ್ಣ 5-20. ಎಕ್ರೆ ಜಮೀನು ನಮ್ಮ ತಂದೆಯವರಾದ ಹುಣಸೆಕಟ್ಟೆ ಬಸಪ್ಪ ಇವರ ಹೆಸರಿನಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 14-07-1998 ರಂದು ಹಾಗೂ ನಮ್ಮ ತಾಯಿಯವರಾದ ಭರ್ಮಮ್ಮ ಇವರು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನು ನಮಗೆ ಸಂಬಂದಿಸಿದ ಜಮೀನು ಆಗಿರುವ ಕಾರಣ ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಮತ್ತು ತಕರಾರುದಾರರ ಹೇಳಿಕೆಗಳನ್ನು ಕೇಳಿ ಹಾಗೂ ಸದರಿ ಜಮೀನಿನ ಬಗ್ಗೆ ಗ್ರಾಮಲೆಕ್ಕಿಗರು ಮತ್ತು ಕಂದಾಯ ಪರಿವೀಕ್ಷಕರು ಗ್ರಾಮದಲ್ಲಿ ಮರು

ವಿಚಾರಣೆ ಮಾಡಲಾಗಿ ಸದರಿ ಪಟ್ಟದಾರನ ವಾರಸುದಾರರು ಯಾರು ಇಲ್ಲವೆಂದು ವಂಶವೃಕ್ಷಗಳೊಂದಿಗೆ ವರದಿ ಸಲ್ಲಿಸಿರುತ್ತಾರೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕನ್ನಾಯಕನಕಟ್ಟೆ ಗ್ರಾಮದ ಸನಂ 144ಬಿ ವಿಸ್ತೀರ್ಣ 5-20. ಎಕ್ರೆ ಜಮೀನನ್ನು ವಾರಸುದಾರರು ಯಾರು ಇಲ್ಲವೆಂದು ಕಂಡು ಬಂದ ಕಾರಣ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕಿ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 12-04-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಸಿದ್ದಮ್ಮ ಹೆಚ್. ಗಂಡ ಲೇಟ್ ಪರುಶುರಾಮಪ್ಪ ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಹೆಚ್.ಆನಂದ ತಂದೆ ಹುಣಸೆಕಟ್ಟೆ ಹಾಲಪ್ಪ ಕೆ.ಅಯ್ಯನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕೆ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.